ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/37/ಇಸಿಎಸ್(3)/2020

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001
ದೂ.ಸಂ:080-22200777
E-mail: dte.commissioner@gmail.com

ದಿನಾಂಕ: 25.09.2020.

## ಸುತ್ತೋಲೆ

ವಿಷಯ: ಸೆಪ್ಟೆಂಬರ್ 2020 ರ ಡಿಪ್ಲೊಮಾ ಸೆಮಿಸ್ಟರ್ ಥಿಯರಿ ಪರೀಕ್ಷೆಯ ದಿನಾಂಕ: 28.09.2020 ರ ಪರೀಕ್ಷೆಗಳನ್ನು ಮುಂದೂಡಿರುವ ಕುರಿತು.

ಉಲ್ಲೇಖ:
1. ರಾಜ್ಯದ ವಿವಿಧ ರೈತ ಸಂಘಟನೆಗಳು, ಕಾರ್ಮಿಕ ವರ್ಗ ಹಾಗೂ ಇತರೆ ಸಂಘಟನೆಗಳು ದಿನಾಂಕ: 28.09.2020 ರ ಕರ್ನಾಟಕ ಬಂದ್‌ಗೆ ಕರೆ ಕೊಟ್ಟಿರುವ ಬಗ್ಗೆ.
2. ಮಾಧ್ಯಮಗಳ ವರದಿ.

*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ವಿವಿಧ ರೈತ ಸಂಘಟನೆಗಳು, ಕಾರ್ಮಿಕ ವರ್ಗ ಹಾಗೂ ಇತರೆ ಸಂಘಟನೆಗಳು ದಿನಾಂಕ: 28.09.2020 ರಂದು ಕರ್ನಾಟಕ ಬಂದ್‌ಗೆ ಕರೆ ನೀಡಿರುತ್ತಾರೆ, ಈ ಹಿನ್ನೆಲೆಯಲ್ಲಿ ಸೆಪ್ಟೆಂಬರ್ 2020 ರ ಡಿಪ್ಲೊಮಾ ಸೆಮಿಸ್ಟರ್ ಥಿಯರಿ ಪರೀಕ್ಷೆಯ, **ದಿನಾಂಕ: 28.09.2020 ರ ಸೋಮವಾರ** ದಂದು ನಡೆಯಬೇಕಾದ ಎಲ್ಲಾ ಥಿಯರಿ ಪರೀಕ್ಷೆಗಳನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ **ದಿನಾಂಕ: "30.09.2020" ರ ಬುಧವಾರ ಕ್ಕೆ ಮುಂದೂಡಲಾಗಿದೆ. ಪರೀಕ್ಷಾ ವಿಷಯಗಳು ಹಾಗೂ ಸಮಯದಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ ಎಂಬುದನ್ನು** ವಿದ್ಯಾರ್ಥಿಗಳು/ಉಪನ್ಯಾಸಕರು/ಪೋಷಕರು ಗಮನಕ್ಕೆ ತಪ್ಪದೇ ತರುವಂತೆ ಹಾಗೂ ಪಾಲಿಟೆಕ್ನಿಕ್‌ಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

**ನಿರ್ದೇಶಕರು**
**(ತಾಂತ್ರಿಕ ಶಿಕ್ಷಣ)**

ಇವರಿಗೆ: ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಪ್ರಾಂಶುಪಾಲರುಗಳು/ ಮುಖ್ಯ ಅಧೀಕ್ಷಕರು/ ಉಪಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರುಗಳಿಗೆ –ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ:

1. ಖಜಾನೆ ನಿರ್ದೇಶಕರು, ಕರ್ನಾಟಕ ಸರ್ಕಾರ, ಬೆಂಗಳೂರು
2. ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ಬೆಂಗಳೂರು
3. ಪರೀಕ್ಷಾ ತನಿಖಾ ದಳಗಳ ಮುಖಂಡರುಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
4. ಸಂಬಂಧಪಟ್ಟ ಉಪ/ಜಿಲ್ಲಾ ಖಜಾನಾಧಿಕಾರಿಗಳು – ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ
5. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಆಪ್ತಶಾಖೆಗೆ – ಮಾಹಿತಿಗಾಗಿ
6. ನಿರ್ದೇಶಕರು (ತಾಂತ್ರಿಕ ಶಿಕ್ಷಣ) ಇವರ ಆಪ್ತಶಾಖೆಗೆ – ಮಾಹಿತಿಗಾಗಿ
7. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
8. ಇ-ಗವರ್ನೆನ್ಸ್ ವಿಭಾಗ – ವೆಬ್ ಸೈಟ್ ನಲ್ಲಿ ಪ್ರಕಟಿಸಲು
9. ಗಣಕ ಕೇಂದ್ರ, ತಾಂತ್ರಿಕ ಪರೀಕ್ಷಾ ಮಂಡಳಿ – ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು
10. ಕಾರ್ಯದರ್ಶಿಯವರ ಆಪ್ತಶಾಖೆ